**<u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ಜೇವರ್ಗಿ</u>**

**ಸಿ.ಸಿ.ನಂಃ 260/2024**

| | | |
|---|---|---|
| ಪಿರ್ಯಾರ್ದುದಾರಃ | | ಕರ್ನಾಟಕ ಸರ್ಕಾರದ ಪರ ಜೇವರ್ಗಿ ಪೋಲಿಸ ಠಾಣೆ |
| | | **ವಿರುದ್ಧ** |
| ಆರೋಪಿತರು | 1. | ಸೂಫಿ ತಂದೆ ದಾವಲ್ ಸಾಬ ಜಮಾದಾರ,<br>ವಃ 26 ವರ್ಷ, ಉಃ ಒಕ್ಕಲುತನ<br>ಸಾಃ ಮುದಬಾಳ (ಕೆ), ತಾಃ ಜೇವರ್ಗಿ, ಜಿಃ ಕಲ್ಬುರ್ಗಿ. |

**<u>ಆಪಾದನೆ</u>**

ಶ್ರೀಮತಿ ತಯ್ಯಬಾ ಸುಲ್ತಾನಾ, ಬಿ.ಎ., ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳಾದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆ,

ದಿನಾಂಕಃ 27-05-2024ರಂದು ಸಾಯಂಕಾಲ 07-00 ಗಂಟೆ ಸಮಯದಲ್ಲಿ ಜೇವರ್ಗಿ ಪೋಲಿಸ ಠಾಣೆ ವ್ಯಾಪ್ತಿಯ, ಮುದಬಾಳ ಕ್ರಾಸ್ ಹತ್ತಿರವಿರುವ ಸಾರ್ವಜನಿಕ ಸ್ಥಳದಲ್ಲಿ 1ನೇ ಆರೋಪಿಯಾದ ನೀವು 2ನೇ ಆರೋಪಿ ಜೊತೆಗೂಡಿ ಒಂದು ರೂಪಾಯಿಗೆ ಎಂಬತ್ತು ರೂಪಾಯಿಗಳು ಕೊಡುವುದಾಗಿ ಹೇಳಿ ಅಂಕಿ ಸಂಖ್ಯೆಗಳ ಆಧಾರದ ಮೇಲೆ ಸಾರ್ವಜನಿಕರಿಂದ ಹಣ ಪಡೆದು ಮಟಕಾ ಜೂಜಾಟವನ್ನು ಆಡುತ್ತಿರುವಾಗ ಸಿಕ್ಕಿಬಿದ್ದ ಕಾರಣ ಕರ್ನಾಟಕ ಪೋಲಿಸ ಕಾಯಿದೆ ಕಲಂ 78(3) ರಡಿ ಶಿಕ್ಷಾರ್ಹ ಅಪರಾಧ ಎಸಗಿದ ಬಗ್ಗೆ ಆರೋಪಿಸಲಾಗಿದೆ?

ಸದರಿ ಆಪಾದನೆಗಳ ಬಗ್ಗೆ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

ಸದರಿ ಮೇಲಿನ ಆರೋಪಣೆಗಳನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

**ಈ ಮೇಲ್ಕಂಡ ಆರೋಪಗಳ ಬಗ್ಗೆ ವಿಚಾರಣೆಗೆ ಈ ಕೆಳಕಂಡಂತೆ ಆದೇಶಿಸುತ್ತೇನೆ.**

ಪ್ರಶ್ನೆ-1ಃ ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ?

1ನೇ ಆರೋಪಿಯ ಉತ್ತರಃ

ಪ್ರಶ್ನೆ-2ಃ ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯೋ? ಅಥವಾ ವಿಚಾರಣೆಯಾಗಬೇಕೋ?

1ನೇ ಆರೋಪಿಯ ಉತ್ತರಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ.

(ಶ್ರೀಮತಿ ತಯ್ಯಬಾ ಸುಲ್ತಾನಾ)
ಹಿರಿಯ ಸಿವಿಲ್ ಮತ್ತು ಪ್ರ.ದ.ನ್ಯಾ. ದಂಡಾಧಿಕಾರಿಗಳು,
ಜೇವರ್ಗಿ

ದಿನಾಂಕಃ 12-06-2026